ಮೈಸೂರ ಗೆಜೆಟ್ಟ

ಸರ್ಕಾರದಿಂದ ಪಾಯಿಷ್ ಆದ್ದು.

ಬೆಂಗಳೂರು, ಶನಿವಾರ, ಮಾರ್ಚೀ ತಾ|| 14, ಸ್ಕ್ 1885.

ಸೂ॥ ಈ ಭಾಗವನ್ನು ಪ್ರತ್ಯೇಕ ಸೇರಿಸಿ ಇದುವ ಬಗ್ಗೆ ಇದಕ್ಕೆ ಬೇರೆಯಾಗಿ ಪುಟ ಸಂಖ್ಯೆ ಕೊಡಲ್ಪಡುತ್ತೆ.

2ನೇ ಭಾಗ.

ಇಂಡ್ಯಗವರ್ಮೆಂಟ್, ರೆಸಿಡೆಂಟರು, ಚೀಫ್ ಜಡ್ಜ್ಗೀರುವಗ್ಯೈರೇರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಫಿನಾನ್ಷಿಯಲ್ ಇಲಾಖೆ.

1882ನೇ ಇಸವಿಯ ಮೈಸೂರು ರೆಯಿಲ್ವೇ ಲೋನ್.

ತಾರೀಖು 6ನೇ ಜುಲೈ 1883.

ಲಂಡನ್‌ನಲ್ಲಿ ಬಡ್ಡೀ ಸಲ್ಲತಕ್ಕ ಬಗ್ಗೆ, ಪರಾ ಬರೆಯಲ್ಪಡಬಹುದಾದಂತಾ ಸದರೀ ಸಾಲದ ಡಿವೆಂಚರ್‌ಗಳ ಮೇಲೆ ಲಂಡನ್ನಲ್ಲಿ, ಸ್ಟ್ಯಾಂಡ್ ಬೀದಿ 59ನೇ ನಂಬರ್ ಕಟ್ಟಡದಲ್ಲಿರುವ ಬ್ಯಾಂಕರ್‌ಗಳಾದ ಮೆಸ್ಸರ್ಸ್ ಕಾಟ್ಸ್ ಆಂಡ್‌ಕೋ ಯವರು ಬಡ್ಡೀಯನ್ನು ಪಾವತೀ ಮಾಡುವ ಬಗ್ಗೆ ಅವರುಗಳೊಡನೆ ಮೈಸೂರು ಗವರ್ಮೆಂಟಿನವರು ಏರ್ಪಾಡು ಮಾಡಿಕೊಂಡಿರುವದರಿಂದ ಲಂಡನ್ನಲ್ಲಿ ತಮ್ಮ ಡಿವೆಂಚರ್‌ಗಳಿಗೆ ಬಡ್ಡೀಯನ್ನು ತೆಗದುಕೊಳ್ಳಲಿಕ್ಕೆ ಯಿಷ್ಟವುಳ್ಳ ಜನಗಳು ತಮ್ಮ ಡಿವೆಂಚರ್‌ಗಳನ್ನು ಎಷ್ಟೇನ್‌ಮೆಂಟ್ ಯಾನೇ ಪರಾ ಬಗ್ಗೆ ಇದರಡಿ ರುಜು ಮಾಡಿರುವರ ಆಫೀಸಿಗೆ ಕಳುಹಿಸತಕ್ಕದ್ದು.

ಬಡ್ಡೀಯು, ಮದ್ರಾಸ್‌ನಲ್ಲಿ ಮದರಾಸ್ ಬ್ಯಾಂಕಿನ ಮೇಲೆ, ಡ್ಯೂಪ್ಲಿಕೇಟಾದ ಡಿವಾಂಡ್ ಡ್ರಾಫ್ಟ್ಸ್ ಯೆಂಬ ಚೆಕ್ಕುಗಳ ಮೂಲಕ ರೂಪಾಯಿಗಳಾಗಿ ಕೊಡಲ್ಪಡುವದು.

ಎಷ್ಟೇನ್‌ಮೆಂಟ್ ಬಗ್ಗೆ ಫೀ ಯೇನೂ ಚಾರ್ಜ್ ಮಾಡಲ್ಪಡಲಾರದು.

ಹೆಚ್. ಹಡ್ಸರ್ಸ್,
ಕಾಂಪ್ಟ್ರೋಲರ್.

ಮೈಸೂರು ರೆವಿನ್ಯೂ ಸರ್ವೇ ಮತ್ತು ಸೆಟಲ್‌ಮೆಂಟ್ ಇಲಾಖೆ.

ಇಸ್ತಿಹಾರ್‌ನಾಮೆ.

ನಂ. 787. ತಾರೀಖು 25ನೇ ಫಿಬ್ರವರೀ 1885.

ಸರ್ವರಿಗೂ ತಿಳಿಯುವದಕ್ಕೋಸ್ಕರ ಇದರಿಂದ ಪ್ರಕಟಿಸಲ್ಪಡುವದೇನಂದರೆ, ಎಡತೊರೆ ಮತ್ತು ನರಸೀಪುರ ತಾಲ್ಲೂಕುಗಳ ಸೆಟಲ್ಡ್ ಆಗದೆ ಇರುವ ಭಾಗಗಳ ಸಮಸ್ತ ಸರಕಾರೀ ಗ್ರಾಮಗಳ ಸರ್ವೇ ಜವಾಬಂದಿಯು, ಇದೇ ಇಸವಿ ಮಾರ್ಚೀ ತಾರೀಖು 15ನೇ ದಿನ ಯಾ ಆ ಪುನಾರಿಗೆ ಪ್ರಾರಂಭಿಸಲ್ಪಡುತ್ತೆ.

ಜೆ. ಪಿ. ಗ್ರಾಂಟ್,
ಸೂಪರ್‌ಟೆಂಡೆಂಟ್, ರೆವಿನ್ಯೂ ಸರ್ವೆ ಮತ್ತು ಸೆಟಲ್ಮೆಂಟ್.